**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ವೈದ್ಯಕೀಯ ವೆಚ್ಚ ಮರುಪಾವತಿ ಮಾಡುವ ಅಧಿಕಾರವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ: ಆದೇಶ ಸಂಖ್ಯೆ: ಸಿಆಸುಇ 34 ಎಸ್‌ಎಂಆರ್ 2011, ದಿನಾಂಕ:28-9-2011

ಪ್ರಸ್ತಾವನೆ:

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 8 ಮತ್ತು 14(3)ಕ್ಕೆ ಸಂಬಂಧಪಟ್ಟ ಶೆಡ್ಯೂಲ್-I ಮತ್ತು II ರಲ್ಲಿ ಸೂಚಿಸಿರುವ ಸರ್ಕಾರದಿಂದ ಮಾನ್ಯತೆ ಹೊಂದಿರುವ ಅಸ್ಪತ್ರೆಗಳನ್ನು ಹೊರತುಪಡಿಸಿ, ಖಾಸಗಿ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರು ಪಡೆಯುವ ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ನೀಡುವ ಅಭಿಪ್ರಾಯದಂತೆ ಮರುಪಾವತಿಸಲು ನಿಯಮ 14ನ್ನು ಮತ್ತು ಇತರ ನಿಯಮಗಳನ್ನು ಸಡಿಲಿಸುವ ಅಧಿಕಾರವು ನಿಯಮ 31ರಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುತ್ತದೆ. ನಿಯಮ 14ನ್ನು ಸಡಿಲಿಸುವ ಪ್ರಕರಣಗಳಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸಹಮತಿ ನೀಡಿ, ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆಯಲು ಸಲಹೆ ಮಾಡುತ್ತಿದೆ. ಅಂತಹ ಪ್ರಕರಣಗಳಲ್ಲಿ ಮಾತ್ರ ಆರ್ಥಿಕ ಇಲಾಖೆಯು ಪರಿಶೀಲಿಸಿ, ವೈದ್ಯಕೀಯ ವೆಚ್ಚವನ್ನು ಸರ್ಕಾರಿ ನೌಕರರಿಗೆ ಮರುಪಾವತಿಸಲು ಸಹಮತಿ ನೀಡಲಾಗುತ್ತಿದೆ.

ಇದರಿಂದಾಗಿ ಆಗುವ ವಿಳಂಬವನ್ನು ತಪ್ಪಿಸುವ ಸಲುವಾಗಿ ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 8 ಮತ್ತು 14(3)ಕ್ಕೆ ಸಂಬಂಧಪಟ್ಟ ಶೆಡ್ಯೂಲ್- I ಮತ್ತು II ರಲ್ಲಿ ಸೂಚಿಸಿರುವ ಸರ್ಕಾರದಿಂದ ಮಾನ್ಯತೆ ಹೊಂದಿರುವ ಅಸ್ಪತ್ರೆಗಳನ್ನು ಹೊರತುಪಡಿಸಿ, ಖಾಸಗಿ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರು ಪಡೆಯುವ ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ನೀಡುವ ಅಭಿಪ್ರಾಯದಂತೆ ಮರುಪಾವತಿಸಲು ಈ ಮೇಲೆ ಹೇಳಿದ ನಿಯಮಗಳ ನಿಯಮ 14ನ್ನು ಸಡಿಲಿಸಲು ನಿಯಮ 31 ರಿಂದ ಪ್ರದತ್ತವಾದ ಅಧಿಕಾರವನ್ನು ಮೇಲೆ ಓದಲಾದ ದಿನಾಂಕ: 28-9-2011ರ ಸಿಆಸುಇ 34 ಎಸ್‌ಎಂಆರ್ 2011ರ ಆದೇಶದಲ್ಲಿ ಆಡಳಿತ ಇಲಾಖೆಗಳ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಲಾಗಿದೆ. ಈ ಹಿನ್ನಲೆಯಲ್ಲಿ ಮತ್ತು ಅಧಿಕಾರ ವಿಕೇಂದ್ರೀಕರಿಸುವ ಅಗತ್ಯತೆಯನ್ನು ಮನಗಣಿಸಿ, ಆರ್ಥಿಕ ಇಲಾಖೆಯು ಇಂತಹ ಪ್ರಕರಣಗಳಲ್ಲಿ ಆರ್ಥಿಕ ಇಲಾಖೆಯು ಅನುಮತಿಯನ್ನು ನೀಡಿದೆ ಎಂದು ಭಾವಿಸುವಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಆಇ 01 ಟಿಎಫ್‌ಪಿ 2012,
ಬೆಂಗಳೂರು, ದಿನಾಂಕ:20-01-2012.

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 8 ಮತ್ತು 14(3)ಕ್ಕೆ ಸಂಬಂಧಪಟ್ಟ ಶೆಡ್ಯೂಲ್- I ಮತ್ತು II ರಲ್ಲಿ ಸೂಚಿಸಿರುವ ಸರ್ಕಾರದಿಂದ ಮಾನ್ಯತೆ ಹೊಂದಿರುವ ಅಸ್ಪತ್ರೆಗಳನ್ನು ಹೊರತುಪಡಿಸಿ, ಖಾಸಗಿ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರು

.......2

ಪಡೆಯುವ ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ನೀಡುವ ಅಭಿಪ್ರಾಯದಂತೆ ಮರುಪಾವತಿಸಲು ಈ ಮೇಲೆ ಹೇಳಿದ ನಿಯಮಗಳ 31 ರಿಂದ ಪ್ರದತ್ತವಾದ ಅಧಿಕಾರದನ್ವಯ ಎಲ್ಲಾ ವೃಂದದ ಅಧಿಕಾರಿ/ ನೌಕರರ ರೂ. 1.00 ಲಕ್ಷ(ಒಂದು ಲಕ್ಷ) ದವರೆಗಿನ ವೈದ್ಯಕೀಯ ವೆಚ್ಚದ ಮರುಪಾವತಿ ಕುರಿತಂತೆ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ನಿಯಮ 14 ನ್ನು ಸಡಿಲಿಸಿ, ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ಮರುಪಾವತಿಸುವ ಬಗ್ಗೆ ಮಂಜೂರಾತಿ ನೀಡಲು ಆರ್ಥಿಕ ಇಲಾಖೆಯ ಅನುಮತಿ ಪಡೆದಿದೆ ಎಂದು ಭಾವಿಸತಕ್ಕದ್ದು. ಇಂತಹ ಪ್ರಕರಣಗಳನ್ನು ಪರಿಶೀಲಿಸುವಾಗ ಈ ಕೆಳಕಂಡ ಅಂಶಗಳನ್ನು ಮುಖ್ಯವಾಗಿ ಪರಿಶೀಲಿಸಿ, ಸೂಕ್ತ ನಿರ್ಣಯ ಕೈಗೊಳ್ಳತಕ್ಕದ್ದು.

1. ಸರ್ಕಾರಿ ನೌಕರನ ಮಕ್ಕಳು/ತಂದೆ/ತಾಯಿ ವೈದ್ಯಕೀಯ ವೆಚ್ಚದ ಮರುಪಾವತಿಯ ಪ್ರಕರಣಗಳಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 2 ರನ್ವಯ ಸಂಪೂರ್ಣವಾಗಿ ಅವಲಂಬಿತರಾಗಿದ್ದಲ್ಲಿ ಮಾತ್ರ ವೈದ್ಯಕೀಯ ವೆಚ್ಚ ಮರುಪಾವತಿಯ ಪ್ರಕರಣಗಳನ್ನು ಪರಿಶೀಲಿಸತಕ್ಕದ್ದು.

**2**. ಸರ್ಕಾರಿ ನೌಕರನು ಕರ್ನಾಟಕ ಆರ್ಥಿಕ ಸಂಹಿತೆ 1958ರ ಕಲಂ 146 A (ii)ರ ಪ್ರಕಾರ ಸೂಕ್ತಕಾಲದಲ್ಲಿ ವೈದ್ಯಕೀಯ ವೆಚ್ಚದ ಮರುಪಾವತಿಯ ಕ್ಲೈಂ ಅನ್ನು ಮೂಲ ದಾಖಲೆಗಳೊಂದಿಗೆ ಸಲ್ಲಿಸಿದ್ದಾರೆಯೇ? ಇಲ್ಲದಿದ್ದಲ್ಲಿ ಕಾಲವಿಳಂಬ ಮನ್ನಾ ಮಾಡುವ ಬಗ್ಗೆ ಸಂಬಂದಪಟ್ಟ ಸಕ್ಷಮ ಪ್ರಾಧಿಕಾರವು ಆದೇಶ ಹೊರಡಿಸಿದ ನಂತರವೇ ವೈದ್ಯಕೀಯ ವೆಚ್ಚ ಮರುಪಾವತಿಗೆ ಸಹಮತಿಸತಕ್ಕದ್ದು.

3. ಕ್ಲೈಮು ಮಾಡಿರುವ ಚಿಕಿತ್ಸೆಯ ವೆಚ್ಚವನ್ನು ವಿಮಾ ಸಂಸ್ಥೆ ಇತ್ಯಾದಿ ಯಾವುದೇ ಇತರ ಮೂಲದಿಂದ ಹಿಂಪಡೆದಿರುವುದಿಲ್ಲವೆಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

4. ಸರ್ಕಾರಿ ನೌಕರರ ಪತ್ನಿ/ಪತಿಯು ರಾಜ್ಯ/ಕೇಂದ್ರಸರ್ಕಾರಿ / ಅರೆಸರ್ಕಾರಿ/ ಖಾಸಗಿ ಸಂಸ್ಥೆಯ ನೌಕರರಾಗಿದ್ದಲ್ಲಿ ಅವರು ಈ ಬಗ್ಗೆ ವೈದ್ಯಕೀಯ ವೆಚ್ಚದ ಮರುಪಾವತಿಗೆ ಅರ್ಜಿ ಸಲ್ಲಿಸಿರುವುದಿಲ್ಲವೆಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

5. ಸರ್ಕಾರಿ ನೌಕರರ ತಂದೆ/ತಾಯಿಯ ವೈದ್ಯಕೀಯ ವೆಚ್ಚದ ಮರುಪಾವತಿ ಪ್ರಕರಣಗಳಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 2 ರಲ್ಲಿನ ವಿವರಣೆ II ರಲ್ಲಿನ ಷರತ್ತು ಮತ್ತು ನಿಗಧಿಪಡಿಸಿರುವ ಮಾಸಿಕ ವರಮಾನ ಮೀರದ ಪ್ರಕರಣಗಳಲ್ಲಿ ಮಾತ್ರ ವೈದ್ಯಕೀಯ ಮರುವೆಚ್ಚ ಮರುಪಾವತಿಸಲು ಸಹಮತಿ ನೀಡತಕ್ಕದ್ದು.

6. ಯಾವುದೇ ಕಾರಣಕ್ಕೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶಕರು ಶಿಫಾರಸ್ಸು ಮಾಡುವ ಮೊಬಲಗನ್ನು ಮೀರಿ ವೈದ್ಯಕೀಯ ವೆಚ್ಚ ಹಿಂಬರಿಸತಕ್ಕದ್ದಲ್ಲ.

.......3

ವೈದ್ಯಕೀಯ ವೆಚ್ಚ ಮರುಪಾವತಿ ಮೊತ್ತ ಒಂದು ಲಕ್ಷಕ್ಕಿಂತ ಮೀರಿದ ಪ್ರಕರಣಗಳಲ್ಲಿ ನಿಯಮಾವಳಿಗಳಲ್ಲಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಖಚಿತಪಡಿಸಿಕೊಂಡು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಆರ್ಥಿಕ ಇಲಾಖೆಗಳ ಅನುಮೋದನೆಗಾಗಿ ಪ್ರಸ್ತಾವನೆಗಳನ್ನು ಕಳುಹಿಸಿಕೊಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಸಿ. ಶಾಮರಾವ್)**
ಸರ್ಕಾರದ ಉಪ ಕಾರ್ಯದರ್ಶಿ
(ಆರ್ಥಿಕ ನಿಯಮಗಳು, ಆಯವ್ಯಯ
ಸಂಕಲನ ಮತ್ತು ಸಮಿತಿ ಶಾಖೆ)
ಆರ್ಥಿಕ ಇಲಾಖೆ.

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಪ್ರತಿ ಇವರಿಗೆ:

1. ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಬೆಂಗಳೂರು.
2. ಮಹಾಲೇಖಪಾಲರು (ಲೆಕ್ಕ ತನಿಖೆ–1) ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಲೆಕ್ಕ ತನಿಖೆ–2) ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ, ಬೆಂಗಳೂರು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು /ಕಾರ್ಯದರ್ಶಿಗಳು
5. ಸರ್ಕಾರದ ವಿಶೇಷ ಕಾರ್ಯದರ್ಶಿಗಳು /ಅಪರ ಕಾರ್ಯದರ್ಶಿಗಳು /ಜಂಟಿ ಕಾರ್ಯದರ್ಶಿಗಳು/ ಉಪ ಕಾರ್ಯದರ್ಶಿಗಳು ಹಾಗೂ ಅಧೀನ ಕಾರ್ಯದರ್ಶಿಗಳು
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
8. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
13. ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು.
14. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ , ವಿಕಾಸ ಸೌಧ, ಬೆಂಗಳೂರು ( 10 ಪ್ರತಿಗಳೊಂದಿಗೆ)

.....4

15. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
16 ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು–1.
17. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು–1.
18. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
19. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
20. ಕರ್ನಾಟಕ ಸರ್ಕಾರಿ ಸಚಿವಾಲಯ ಗ್ರಂಥಾಲಯ; ವಿಧಾನ ಮಂಡಲ ಗ್ರಂಥಾಲಯ
21. ಶಾ.ರ.ಕ./ ಬಿಡಿ ಪ್ರತಿ.

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.